ಅ.ಸಂ./ *Ref.No.* KU/DPAR/NT/2019 1575 ದಿನಾಂಕ/*Date*: 12 JUN 2019

## ಸುತ್ತೋಲೆ

**ವಿಷಯ:** ವಿಶ್ವವಿದ್ಯಾಲಯದಲ್ಲಿನ **ವಿವಿಧ ವೃಂದದ** ನೌಕರರ ತಾತ್ಕಾಲಿಕ ಜೇಷ್ಠತಾ ಪಟ್ಟಿ ಪ್ರಕಟಿಸುವ ಕುರಿತು.

**ಉಲ್ಲೇಖ:**
1) ಮಾನ್ಯ ಸರ್ವೋಚ್ಚ ನ್ಯಾಯಾಲಯವು ಬಿ.ಕೆ.ಪವಿತ್ರಾ ಪ್ರಕರಣದಲ್ಲಿ ದಿ.09.02.2017 ರಂದು ನೀಡಿದ ತೀರ್ಪು.
2) ದಿನಾಂಕ 06.05.2017 ರ ಸರ್ಕಾರದ ಆದೇಶ ಸಂಖ್ಯೆ: ಡಿಪಿಎಆರ್/182/ಎಸ್ಆರ್/2011.
3) ದಿನಾಂಕ 24.10.2017 ರ ಸುತ್ತೋಲೆ ಸಂಖ್ಯೆ:ಕವಿವಿ/ಸಿಆಸುವಿ/ಶಿಕ್ಷಕೇತರ/10/2017/1997.
4) ದಿನಾಂಕ 12.06.2018 ರ ಸರ್ಕಾರದ ಪತ್ರ ಸಂಖ್ಯೆ: ಇಡಿ 216 ಯುಎನ್ಇ 2017.
5) ದಿನಾಂಕ 21.07.2018 ರ ಅಧಿಸೂಚನೆ ಸಂಖ್ಯೆ: ಕವಿವಿ/ಕುಸ/2018-19/ಎ1748.
6) ದಿನಾಂಕ 16.10.2018 ರ ವಿಶ್ವವಿದ್ಯಾಲಯದ ಸುತ್ತೋಲೆ ಸಂಖ್ಯೆ:KU-Regr/2018-19/96.
7) ದಿನಾಂಕ.27.02.2019 ರ ಸರ್ಕಾರದ ಆದೇಶ ಸಂಖ್ಯೆ.ಸಿಆಸುಇ 186 ಎಸ್ಆರ್ಎಸ್ 2018.
8) ಮಾನ್ಯ ಸರ್ವೋಚ್ಚ ನ್ಯಾಯಾಲಯವು ಬಿ.ಕೆ.ಪವಿತ್ರಾ ಪ್ರಕರಣದಲ್ಲಿ ದಿ.10.05.2019 ರಂದು ನೀಡಿದ ತೀರ್ಪು.
9) ದಿನಾಂಕ.15.05.2019 ರ ಸರ್ಕಾರದ ಆದೇಶ ಸಂಖ್ಯೆ.ಸಿಆಸುಇ 186 ಎಸ್ಆರ್ಎಸ್ 2018.
10) ಮಾನ್ಯ ಕುಲಪತಿಗಳ ಆದೇಶ ದಿನಾಂಕ. 12.06.2019.

****@****

ಮಾನ್ಯ ಸರ್ವೋಚ್ಚ ನ್ಯಾಯಾಲಯವು ಬಿ.ಕೆ.ಪವಿತ್ರಾ ವಿರುದ್ಧ ಕೇಂದ್ರ ಸರ್ಕಾರ – ಸಿವಿಲ್ ಅಪೀಲು ಸಂಖ್ಯೆ: 2368/2011ರ ಪ್ರಕರಣದಲ್ಲಿ ದಿನಾಂಕ 09.02.2017 ರಂದು ನೀಡಿದ್ದ ತೀರ್ಪಿನ ಹಿನ್ನೆಲೆಯಲ್ಲಿ, ಉಲ್ಲೇಖ-2 ರ ಸರ್ಕಾರದ ಆದೇಶದಲ್ಲಿ, ದಿನಾಂಕ 27.04.1978 ರಿಂದ ಮುಂಬಡ್ತಿ ಮೀಸಲಾತಿ ನೀತಿಯನ್ನು ಅನುಸರಿಸಿ ಮುಂಬಡ್ತಿ ನೀಡಿದ ವೃಂದಗಳ ಜೇಷ್ಠತಾ ಪಟ್ಟಿಗಳನ್ನು ಮತ್ತು ಮುಂದಿನ ವೃಂದಗಳ ಜೇಷ್ಠತಾ ಪಟ್ಟಿಗಳನ್ನು ಪುನರಾವಲೋಕನೆ ಮಾಡಿ ಪರಿಷ್ಕರಿಸಿ ಪ್ರಕಟಿಸಲು ನೀಡಿದ ಮಾರ್ಗಸೂಚನೆಗಳನುಸಾರ, ವಿಶ್ವವಿದ್ಯಾಲಯದಲ್ಲಿ ರಚಿಸಲ್ಪಟ್ಟ ಆಂತರಿಕ ಸಮಿತಿಯು ನೀಡಿದ ಸಲಹೆ ಮತ್ತು ಸೂಚನೆಗಳ ಮೇರೆಗೆ, **ವಿವಿಧ ವೃಂದಗಳ** ಅಂತಿಮ ಜೇಷ್ಠತಾ ಪಟ್ಟಿಗಳನ್ನು ಪುನರಾವಲೋಕನೆ ಮಾಡಿ ಉಲ್ಲೇಖ-3 ರ ಸುತ್ತೋಲೆಯಲ್ಲಿ ಪರಿಷ್ಕೃತ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿತ್ತು.

ಪ್ರಕಟಿಸಲಾದ ಈ ಜೇಷ್ಠತಾ ಪಟ್ಟಿಗೆ ಆಕ್ಷೇಪಣೆಗಳು ಸ್ವೀಕೃತವಾದ ಹಿನ್ನೆಲೆಯಲ್ಲಿ ಮತ್ತು ಪ್ರಕಟಿಸಲಾದ ಜೇಷ್ಠತಾ ಪಟ್ಟಿಗಳಲ್ಲಿ ನ್ಯೂನ್ಯತೆಗಳು ಇದ್ದಲ್ಲಿ ಅವುಗಳನ್ನು ಪರಿಶೀಲಿಸಿ ಸರಿಪಡಿಸಲು, ಉಲ್ಲೇಖ-4 ರ ಸರ್ಕಾರದ ಸುತ್ತೋಲೆಯಲ್ಲಿನ ಸೂಚನೆಗಳ ಪ್ರಕಾರ ಪ್ರಕಟಿಸಲಾದ ಜೇಷ್ಠತಾ ಪಟ್ಟಿಗಳನ್ನು ಪರಿಶೀಲಿಸಿ ಸಲಹೆ ನೀಡುವಂತೆ ಉಲ್ಲೇಖ-5 ರ ಅಧಿಸೂಚನೆಯಲ್ಲಿ ಕುಲಸಚಿವರ ಅಧ್ಯಕ್ಷತೆಯಲ್ಲಿ ಒಂದು ಸಮಿತಿಯನ್ನು ರಚಿಸಲಾಗಿತ್ತು. ಸದರಿ ಸಮಿತಿಯು, ಉಲ್ಲೇಖ-3 ರಂತೆ ಪ್ರಕಟಿಸಲಾದ ಜೇಷ್ಠತಾ ಪಟ್ಟಿಗಳನ್ನು ಪುನರಾವಲೋಕನೆ ಮಾಡಿ ನೀಡಿದ ಸಲಹೆ ಮತ್ತು ಸೂಚನೆಗಳನ್ನು ಪರಿಗಣಿಸಿ, ಅವುಗಳಲ್ಲಿ ಕಂಡು ಬಂದ ನ್ಯೂನತೆಗಳನ್ನು ಸರಿಪಡಿಸಿ **ವಿವಿಧ** ವೃಂದಗಳ ತಾತ್ಕಾಲಿಕ ಜೇಷ್ಠತಾ ಪಟ್ಟಿಗಳನ್ನು ಉಲ್ಲೇಖ-6 ರ ಸುತ್ತೋಲೆಯ ಮೂಲಕ ಪ್ರಕಟಿಸಿ, ಬಾಧಿತ ನೌಕರರಿಗೆ ಆಕ್ಷೇಪಣೆಗಳನ್ನು (ವೃಂದವಾರು) ಸಲ್ಲಿಸುವಂತೆ ತಿಳಿಸಲಾಗಿತ್ತು.

ಅದರಂತೆ ಸ್ವೀಕೃತವಾದ ಆಕ್ಷೇಪಣೆಗಳ ಪರಿಶೀಲನೆ ಹಂತದಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ದಾಖಲಾಗಿದ್ದ ಸಿವಿಲ್ ಅಪೀಲು ಸಂಖ್ಯೆ: 2368/2011 – ಬಿ.ಕೆ.ಪವಿತ್ರ ಮತ್ತು ಇತರರು ವಿರುದ್ಧ ಕೇಂದ್ರ ಸರ್ಕಾರ ಮತ್ತು ಇತರರು ಮತ್ತು ಸಂಬಂಧಿಸಿದ ರಿವ್ಯೂ ಅರ್ಜಿ ಹಾಗೂ ರಿಟ್ ಅರ್ಜಿಗಳಲ್ಲಿನ ಪ್ರಕರಣ ಸಂಖ್ಯೆ.ಎಂ.ಎ.1151/2018 ರಲ್ಲಿ, ದಿನಾಂಕ.10.05.2019 ರಂದು ನೀಡಿದ ತೀರ್ಪಿನ ಹಿನ್ನಲೆಯಲ್ಲಿ ಕರ್ನಾಟಕ (ರಾಜ್ಯದ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ) ಮೀಸಲಾತಿ ಆಧಾರದ ಮೇಲೆ ಬಡ್ತಿ ಹೊಂದಿರುವ ಸರ್ಕಾರಿ ನೌಕರರಿಗೆ ತತ್ಪರಿಣಾಮವಾದ ಜೇಷ್ಠತೆಯನ್ನು ವಿಸ್ತರಿಸುವ ಅಧಿನಿಯಮ, 2017 ರನ್ವಯ ಕ್ರಮ ತೆಗೆದುಕೊಳ್ಳುವ ಬಗ್ಗೆ ಉಲ್ಲೇಖ-7 ರ ಸರ್ಕಾರದ ಆದೇಶದಲ್ಲಿ ಒಳಗೊಂಡಿರುವ ಸೂಚನೆಗಳನ್ವಯ ಎಲ್ಲಾ ನೇಮಕಾತಿ ಪ್ರಾಧಿಕಾರಗಳು ಕ್ರಮ ತೆಗೆದುಕೊಳ್ಳುವಂತೆ, ಸರ್ಕಾರ ಉಲ್ಲೇಖ-9 ರ ಆದೇಶದಲ್ಲಿ ನಿರ್ದೇಶಿಸಿರುತ್ತದೆ.

ಮೇಲ್ಕಂಡ ಹಿನ್ನೆಲೆಯಲ್ಲಿ, ಉಲ್ಲೇಖ-3 ಹಾಗೂ 6 ರ ಸುತ್ತೋಲೆಯಲ್ಲಿ ಪ್ರಕಟಿಸಲಾಗಿದ್ದ **ವಿವಿಧ** ವೃಂದಗಳ ಜೇಷ್ಠತಾ ಪಟ್ಟಿಗಳನ್ನು, ಉಲ್ಲೇಖ-5 ರಲ್ಲಿ ರಚಿತಗೊಂಡ ಸಮಿತಿಯು ನೀಡಿದ ಸಲಹೆ ಮತ್ತು ಸೂಚನೆಗಳ ಅನುಸಾರ ಕರ್ನಾಟಕ ರಾಜ್ಯ ಸಿವಿಲ್ ಸೇವಾ (ಮುಂಬಡ್ತಿ, ವೇತನ ಮತ್ತು ಪಿಂಚಣಿ ಕ್ರಮಬದ್ಧತೆ) ಅಧಿನಿಯಮ, 1973 ರ ಸೆಕ್ಷನ್ 4, 5 ಮತ್ತು 6 ನ್ನು ಸೆಕ್ಷನ್ 9 ರೊಡನೆ ಸಹವಾಚನ ಮಾಡಿಕೊಂಡು, ಅವುಗಳನ್ವಯ ದಿನಾಂಕ.27.04.1978 ರಿಂದ ಜಾರಿಗೆ ಬರುವಂತೆ ಪುನರಾವಲೋಕಿಸಿ, **ವಿವಿಧ** ವೃಂದದ ತಾತ್ಕಾಲಿಕ ಜೇಷ್ಠತಾ ಪಟ್ಟಿಗಳನ್ನು ಆಡಳಿತ ಕಟ್ಟಡದ ಸೂಚನಾ ಫಲಕಕ್ಕೆ ಲಗತ್ತಿಸಲಾಗಿದೆ ಹಾಗೂ ವಿಶ್ವವಿದ್ಯಾಲಯದ ಅಂತರ್ಜಾಲ www.kud.ac.in ದಲ್ಲಿ ಬಿತ್ತರಿಸಲಾಗಿದೆ.

ಸದರಿ ತಾತ್ಕಾಲಿಕ ಜೇಷ್ಠತಾ ಪಟ್ಟಿಗೆ ಸಂಬಂಧಿಸಿದಂತೆ ಬಾಧಿತರಾದ ನೌಕರರು ಇದ್ದಲ್ಲಿ, ಅವರುಗಳು ತಮ್ಮ ಆಕ್ಷೇಪಣೆಗಳನ್ನು (ವೃಂದವಾರು) ಈ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಹೊರಡಿಸಿದ ದಿನಾಂಕ: 14.06.2019 ರ 11 ಗಂಟೆಯ ಒಳಗಾಗಿ ಕುಲಸಚಿವರು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ ಇವರಿಗೆ ಸಲ್ಲಿಸತಕ್ಕದ್ದು. ಅವಧಿ ಮೀರಿ ಸಲ್ಲಿಸಿದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಕುಲಸಚಿವರು

ಗೆ,

1) ಸಂಬಂಧಿಸಿದ ಎಲ್ಲರ ಗಮನಕ್ಕೆ.
2) ಎಲ್ಲ ವಿಭಾಗಗಳ ಮುಖ್ಯಸ್ಥರು, ಮುಂದುವರೆದು, ಮೇಲ್ಕಾಣಿಸಿದ ವಿಷಯವನ್ನು ವಿಭಾಗಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಬಂಧಿಸಿದ ನೌಕರರ ಗಮನಕ್ಕೆ ತರಲು ಸೂಚಿಸಲಾಗಿದೆ.